1 2	3	4	5	6
11) ಇಂಡಿ	1, 05, 000	5	80, 000	3
12) ಇತರೆ	80, 000	4	10, 000	1
ಒಟ್ಟು	9, 09, 000	43	11, 65, 000	44

ವಿಷಯ:- ಬೆಂಗಳೂರಿನ ಜಯನಗರದಲ್ಲಿ ಹೊಸ ಬಸ್ ನಿಲ್ದಾಣ ನಿರ್ಮಾಣ.

1477 (2480) **ಶ್ರೀ ರಾಮಲಿಂಗಾರೆಡ್ಡಿ, (ಜಯನಗರ):-** ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಂಗಳೂರಿನ ಜಯನಗರ ಬಸ್ ನಿಲ್ದಾಣವನ್ನು ವಿಸ್ತರಿಸಲು ಸಾಧ್ಯವಿದೆಯೇ?

ಆ) ಇಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು?

ಇ) ಈ ಬಸ್ ನಿಲ್ದಾಣ ಬಹಳ ಚಿಕ್ಕದಾಗಿದ್ದು ಅದರಿಂದ ಪ್ರಯಾಣಿಕರಿಗೆ ಬಹಳ ತೊಂದರೆಯುಂಟಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಜಯನಗರದಲ್ಲಿ ಹೊಸ ಬಸ್ ನಿಲ್ದಾಣ ನಿರ್ಮಿಸಲು ಸರ್ಕಾರದವರು ಕ್ರಮ ಕೈಗೊಳ್ಳುವರೇ?

ಶ್ರೀ ಪಿ.ಜಿ.ಆರ್. ಸಿಂಧ್ಯಾ(ಸಾರಿಗೆ ಸಚಿವರು):-

ಅ) ಇಲ್ಲ.

ಆ) ಇದಕ್ಕೋಸ್ಕರ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ ಜಾಗವು ಲಭ್ಯವಿರುವುದಿಲ್ಲ.

ಇ) ಹೌದು.

ಈ) ಅಂತಹ ಪ್ರಸ್ತಾವನೆ ಈಗ ಇರುವುದಿಲ್ಲ.

ವಿಷಯ:- ರಾಜ್ಯದಲ್ಲಿನ ಸಬ್‌ರಿಜಿಸ್ಟ್ರಾರ್ ಕಛೇರಿಗಳಲ್ಲಿ ನೋಂದಣಿ ಶುಲ್ಕವನ್ನು ಡಿ.ಡಿ. ಮೂಲಕ ಪಾವತಿಸುವ ಕುರಿತು.

1478 (2478) **ಶ್ರೀ ರಾಮಲಿಂಗಾ ರೆಡ್ಡಿ (ಜಯನಗರ):-** ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿನ ಸಬ್ ರಿಜಿಸ್ಟ್ರಾರ್ ಕಛೇರಿಗಳಲ್ಲಿ ನೋಂದಣಿ ಶುಲ್ಕವನ್ನು ಡಿಮ್ಯಾಂಡ್ ಡ್ರಾಫ್ಟ್ ಮೂಲಕ ಪಾವತಿ ಮಾಡುವ ಸೌಲಭ್ಯವನ್ನು ಜಾರಿಗೆ ತರಲಾಗಿದೆಯೇ?

ಆ) ಇಲ್ಲದಿದ್ದಲ್ಲಿ, ಈ ಪದ್ಧತಿಯನ್ನು ಜಾರಿಗೆ ತಂದರೆ ಅದರಿಂದ ಭ್ರಷ್ಟಾಚಾರ ಕಡಿಮೆಯಾಗುವುದಿಲ್ಲವೇ?

ಇ) ಹಾಗಿದ್ದಲ್ಲಿ ಈ ಪದ್ಧತಿಯನ್ನು ಜಾರಿಗೆ ತರಲು ಸರ್ಕಾರದವರು ಕ್ರಮ ಕೈಗೊಳ್ಳುವರೇ?